



ಅರುಣ ಪಿ. ಭಟ್ಟ

## ವಾರ ಭವಿಷ್ಯ 7.5.2020ರಿಂದ 13.5.2020ರವರೆಗೆ




ಬಹಳ ಮುಖ್ಯವಾದ ಪಟ್ಟಿಯೊಂದನ್ನು ಸಿದ್ಧ ಮಾಡಿಕೊಳ್ಳುವುದಕ್ಕೆ ವಾರದ ಶುರುವಿನಲ್ಲಿ ಸಿದ್ಧರಾಗುತ್ತೀರಿ. ಆದರೆ ಕೆಲವು ವಿಚಾರಗಳು ಕಣ್ತಪ್ಪಿನಿಂದ ಬಿಟ್ಟು ಹೋಗುವ ಸಾಧ್ಯತೆ ಇದೆ. ಇದರಿಂದ ಹಿರಿಯ ಅಧಿಕಾರಿಗಳು ಬೇಸರಿಸಿಕೊಳ್ಳುತ್ತಾರೆ. ಈ ಅವಧಿಯಲ್ಲಿ ತಾಳ್ಮೆ ಮತ್ತು ಧೈರ್ಯ ಬಹಳ ಮುಖ್ಯ. ಸಮಯದ ಕೊರತೆ ವಿಪರೀತವಾಗಿ ಕಾಡುತ್ತದೆ. ಶುಭದಿನ 12. ಶ್ರೀ ದುರ್ಗಾಪಾರಾಯಣ ಮಾಡಿರಿ




ವಾರದ ಶುರುವಿನಲ್ಲಿ ವೈಯಕ್ತಿಕ ಹಾಗೂ ವ್ಯಾಪಾರ ಕ್ಷೇತ್ರಕ್ಕೆ ಸಂಬಂಧಿಸಿದ ವಿಷಯಗಳ ಪರಾಮರ್ಶೆಗೆ ಹೆಚ್ಚು ಸಮಯವನ್ನು ಮೀಸಲಿಡಲಿದ್ದೀರಿ. ಆರೋಗ್ಯದಲ್ಲಿ ಏರುಪೇರಾಗುವ ಸಾಧ್ಯತೆಗಳಿವೆ. ಆಹಾರ ನೀರಿನ ಸೇವನೆಯಲ್ಲಿ ಬಹಳ ಎಚ್ಚರಿಕೆಯಿಂದ ಇರಬೇಕು. ಉದ್ಯೋಗ ಸ್ಥಳದಲ್ಲಿ ಒತ್ತಡದ ಸನ್ನಿವೇಶ ಎದುರಾಗಲಿದೆ. ಶುಭದಿನ 8.ವಿಷ್ಣು ಸಹಸ್ರನಾಮ ಪಠಿಸಿರಿ.




ವಾರದ ಶುರುವಿನಲ್ಲಿ ಕೌಟುಂಬಿಕ ವಿಚಾರದಲ್ಲಿ ಉತ್ತಮ ಹಾಗೂ ಸೂಕ್ತವಾದ ಹಲವು ಅವಕಾಶಗಳು ದೊರೆಯಲಿವೆ. ಗ್ರಹಗತಿಗಳು ಉತ್ತಮವಾಗಿ ಇರುವುದರಿಂದ ನಿಮಗೆ ದೊರೆಯುವ ಅವಕಾಶಗಳನ್ನು ಪರಿಣಾಮಕಾರಿಯಾಗಿ ಬಳಸಿಕೊಳ್ಳಲಿದ್ದೀರಿ. ಈ ಅವಧಿಯಲ್ಲಿ ನೀವು ಹಾಕುವ ಶ್ರಮಕ್ಕೆ ಅದ್ಭುತವಾದ ಯಶಸ್ಸು ದೊರೆಯಲಿದೆ. ಶುಭದಿನ 9. ಹನುಮಾನ್ ಚಾಲೀಸ್ ಪಠಿಸಿರಿ.




ವಾರದ ಶುರುವಿನಲ್ಲಿ ವೈಯಕ್ತಿಕ ಹಾಗೂ ವೃತ್ತಿಪರ ಜೀವನದಲ್ಲಿ ಕೆಲವು ಬಿಕ್ಕಟ್ಟು ಹಾಗೂ ಸಮಸ್ಯೆಗಳು ಎದುರಾಗುತ್ತವೆ. ವಾರದ ಮಧ್ಯ ಭಾಗದ ಹೊತ್ತಿಗೆ ಆರೋಗ್ಯ ಚೇತರಿಸಿಕೊಳ್ಳುತ್ತದೆ. ಕೌಟುಂಬಿಕವಾಗಿ ಸಂತೋಷ ಸಮಾಧಾನ ಇರುತ್ತದೆ. ವಾರದ ಅಂತ್ಯಕ್ಕೆ ಸರಿಯುತ್ತಾ ವೈಯಕ್ತಿಕ ಸಂಬಂಧ ಮತ್ತು ಆರೋಗ್ಯ ಅತ್ಯುತ್ತಮವಾಗುತ್ತದೆ. ಶುಭದಿನ 11. ಈಶ್ವರನಿಗೆ ರುದ್ರಾಭಿಷೇಕ ಮಾಡಿರಿ.




ವಾರದ ಆರಂಭವು ಬಹಳ ಸಂತೋಷವಾಗಿರುತ್ತದೆ. ಒಂದು ಕಡೆ ಆದಾಯ ಹೆಚ್ಚಿಸಿಕೊಳ್ಳುವುದಕ್ಕೆ ಉತ್ತಮ ಅವಕಾಶಗಳು ದೊರೆಯಲಿವೆ. ಇನ್ನೊಂದು ಕಡೆ ಮನೆಯನ್ನು ಸಲೀಸಾಗಿ ನಡೆಸಲು ಬೇಕಾದ ತೀರ್ಮಾನಗಳನ್ನು ಸರಿಯಾದ ಸಮಯದಲ್ಲಿ ಕೈಗೊಳ್ಳುತ್ತೀರಿ. ಇದರಿಂದ ನಿಮ್ಮ ಆತ್ಮವಿಶ್ವಾಸ ಮತ್ತಷ್ಟು ಹೆಚ್ಚಾಗಲಿದೆ. ಇದರಿಂದ ವಿಪರೀತ ಬೇಸರ ಆಗುತ್ತದೆ. ಶುಭದಿನ 12. ಸೌಂದರ್ಯಲಹರಿ ಪಠಿಸಿರಿ.




ವ್ಯಾಪಾರ ವಿಸ್ತರಣೆಗೆ ಅಗತ್ಯ ಇರುವ ನಿರ್ಧಾರಗಳನ್ನು ಮಾಡಲಿದ್ದೀರಿ. ಈ ಪ್ರಯತ್ನದಲ್ಲಿ ನಿಮಗೆ ಯಶಸ್ಸು ದೊರೆಯಲಿದೆ. ಈ ಅವಧಿಯಲ್ಲಿ ಆರೋಗ್ಯ ಉತ್ತಮವಾಗಿ ಇರುತ್ತದೆ. ಜತೆಗೆ ಯಾವುದೇ ಚಿಂತೆ ಇರುವುದಿಲ್ಲ. ಗ್ರಹಗತಿಗಳು ಶುಭ ದೃಷ್ಟಿ ಬೀರುವ ಸಮಯ ಇದು. ವಾರದ ಮಧ್ಯ ಭಾಗದಲ್ಲಿ ಆರೋಗ್ಯ ಅತ್ಯುತ್ತಮವಾಗಿರುತ್ತದೆ. ಶುಭದಿನ 8. ಗಣಪತಿಗೆ ದೂರ್ವಾರ್ಚನೆ ಮಾಡಿಸಿರಿ.




ಮಾಧ್ಯಮ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುವವರಿಗೆ ಯಶಸ್ಸು ದೊರೆಯುತ್ತದೆ. ಇನ್ನು ಲೇಖಕರಾದವರಿಗೆ ಓದುಗರಿಂದ ಪುಸ್ತಕಗಳ ಬೇಡಿಕೆ ಹೆಚ್ಚಾಗಲಿದೆ. ಇನ್ನು ಸಿನಿಮಾ, ತಂತ್ರಜ್ಞಾನ ಕ್ಷೇತ್ರದಲ್ಲಿ ಇರುವವರಿಗೆ ಉತ್ತಮವಾದ ಪ್ರಗತಿ ಇದೆ. ಈ ಅವಧಿಯಲ್ಲಿ ಮನೆಯಲ್ಲಿ ಧಾರ್ಮಿಕ ಕಾರ್ಯಕ್ರಮಗಳನ್ನು ಆಯೋಜನೆ ಮಾಡುವ ಸಾಧ್ಯತೆ ಇದೆ. ಶುಭದಿನ 10. ನವಗ್ರಹ ಸ್ತೋತ್ರ ಪಠಿಸಿರಿ.




ಸಾಮಾಜಿಕ ರಾಜಕೀಯ ಜೀವನದಲ್ಲಿ ನಿಮ್ಮ ಪ್ರಭಾವ ಅಷ್ಟಾಗಿ ಕೆಲಸಕ್ಕೆ ಬರುತ್ತಿಲ್ಲ ಎಂಬ ಆತಂಕ ಎದುರಾಗುತ್ತದೆ. ಇದರಿಂದ ಬಹಳ ಚಿಂತೆಗೆ ಒಳಗಾಗುತ್ತೀರಿ. ಹೀಗೆ ದುರ್ಬಲ ಆಗುತ್ತಿರುವ ವರ್ಚಸ್ಸನ್ನು ಬಲಿಷ್ಠಗೊಳಿಸುವ ನಿಟ್ಟಿನಲ್ಲಿ ಹೆಚ್ಚಿನ ಕೆಲಸ ಮಾಡುತ್ತೀರಿ. ವೈಯಕ್ತಿಕ ಸಂಬಂಧದಲ್ಲಿ ಪರಸ್ಪರ ನಿಂದನೆಗಳನ್ನು ಮಾಡುವ ಸಾಧ್ಯತೆ ಇದೆ. ಶುಭದಿನ 10. ಶನಿ ಸ್ತೋತ್ರ ಪಠಣ ಮಾಡಿರಿ.




ಸಾರ್ವಜನಿಕ ಸಂಪರ್ಕ ಹೆಚ್ಚು ಮಾಡಿಕೊಳ್ಳಲು ವಾರದ ಶುರುವಿನಿಂದಲೇ ಹೆಚ್ಚು ಶ್ರಮ ಹಾಕುತ್ತೀರಿ. ಈ ಪ್ರಯತ್ನದಿಂದ ನಿಮಗೆ ಲಾಭ ಆಗುತ್ತದೆ. ವ್ಯಾಪಾರ ಉದ್ಯಮ ನಡೆಸುತ್ತಿರುವವರು ಈಗ ನೀಡುತ್ತಿರುವ ಸೇವೆಗಳ ಜತೆಗೆ ಇನ್ನಷ್ಟು ಸೇರ್ಪಡೆ ಮಾಡಲಿದ್ದೀರಿ. ಆ ಮೂಲಕ ಇನ್ನೂ ಹೆಚ್ಚು ದುಡಿಯಬೇಕು ಎಂಬ ನಿಮ್ಮ ಉದ್ದೇಶ ಈಡೇರಿದಂತಾಗುತ್ತದೆ. ಶುಭದಿನ 9. ಶ್ರೀವೆಂಕಟೇಶ್ವರ ಸ್ತೋತ್ರ ಪಠಿಸಿರಿ




ವಾರದ ಆರಂಭದಲ್ಲಿ ವ್ಯಾಪಾರ ಉದ್ಯಮ ಹಾಗೂ ವ್ಯವಹಾರದ ಬಗ್ಗೆ ಗಮನ ಹೆಚ್ಚು ನೀಡಬೇಕಾಗುತ್ತದೆ. ಅದರ ಜತೆಗೆ ಬಹಳ ಕಾಲದಿಂದ ಜಾರಿಗೆ ತರಬೇಕು ಅಂದುಕೊಂಡಿದ್ದ ವಿಚಾರಗಳನ್ನು ಒಂದೊಂದಾಗಿ ಜಾರಿಗೆ ತರುತ್ತೀರಿ. ನಿಮ್ಮ ಕೈ ಕೆಳಗೆ ಕೆಲಸ ಮಾಡುವವರಿಗೆ ಪ್ರೋತ್ಸಾಹ ನೀಡುತ್ತೀರಿ. ಇನ್ನು ಅನಾರೋಗ್ಯ ಸಮಸ್ಯೆಗಳು ಈ ಅವಧಿಯಲ್ಲಿ ಕಾಡಬಹುದು. ಶುಭದಿನ 12. ಶಿವಕವಚ ಪಠಣ ಮಾಡಿರಿ.




ವಾರದ ಶುರುವಿನಲ್ಲಿ ನಿಮ್ಮ ಬಳಿ ಇರುವ ಹಣದ ಸದುಪಯೋಗ ಮಾಡಿಕೊಳ್ಳುವ ಬಗ್ಗೆ ಯೋಜನೆ ರೂಪಿಸಲಿದ್ದೀರಿ. ಆ ನಂತರ ಅದರ ಅನುಷ್ಠಾನಕ್ಕಾಗಿ ಹಾಕುವ ಶ್ರಮಕ್ಕೆ ನಿರೀಕ್ಷಿತ ಫಲಿತಾಂಶ ಕೂಡ ದೊರೆಯಲಿದೆ. ಮಾರಾಟ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುವವರಿಗೆ ಲಾಭ ಪಡೆಯಲು ಅತ್ಯುತ್ತಮ ಅವಕಾಶಗಳಿವೆ. ಶುಭದಿನ 11. ದಕ್ಷಿಣಾಮೂರ್ತಿ ಸ್ತೋತ್ರ ಪಠಿಸಿರಿ.




ಈವರೆಗೆ ಮಾಡಿದ ಕೆಲಸಗಳು ಸರಿಯಾಗಿ ಇವೆಯೇ ಎಂದು ಪರಿಶೀಲನೆ ಮಾಡುವುದಕ್ಕೆ ವಾರದ ಆರಂಭದ ದಿನಗಳು ಮೀಸಲಾಗುತ್ತವೆ. ನೀವು ಯಾರನ್ನು ಆಯ್ಕೆ ಮಾಡಿಕೊಂಡರೋ ಅವರಿಗೆ ವಹಿಸಿದ ಕೆಲಸಗಳನ್ನು ಸರಿಯಾಗಿ ಮಾಡುವ ಅರ್ಹತೆ, ತಿಳಿವಳಿಕೆ ಇರುವುದಿಲ್ಲ. ಆದರೆ ಈಗಾಗಲೇ ಈ ವಿಷಯದಲ್ಲಿ ಮುಂದುವರಿದಿರುತ್ತೀರಿ. ಇನ್ನು ಆರೋಗ್ಯ ಉತ್ತಮವಾಗಿರುತ್ತದೆ. ಶುಭದಿನ 8. ಚಂಡಿ ಪಾರಾಯಣ ಮಾಡಿರಿ.